# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 627 |
| ಸದಸ್ಯರ ಹೆಸರು | ಶ್ರೀಮತಿ ಬಲ್ಕೀಸ್ ಬಾನು |
| ಉತ್ತರಿಸುವ ದಿನಾಂಕ | 12.03.2025 |
| ಉತ್ತರಿಸುವವರು | ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಹಿಂದೂ ಮತ್ತು ಮುಸಲ್ಮಾನರುಗಳು ಭೇಟಿ ನೀಡುತ್ತಿರುವ ಭಾವೈಕ್ಯತೆ ಸ್ಥಳಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು /ತಾಲ್ಲೂಕುವಾರು ವಿವರ ನೀಡುವುದು) | ಧಾರ್ಮಿಕ ದತ್ತಿ ಇಲಾಖೆಯ ಆಡಳಿತ ವ್ಯಾಪ್ತಿಯಲ್ಲಿ ಬರುವ ಧಾರ್ಮಿಕ ಸಂಸ್ಥೆಗಳ ಪೈಕಿ ಈ ಕೆಳಕಂಡ ಎರಡು ಪ್ರಮುಖ ಧಾರ್ಮಿಕ ಸಂಸ್ಥೆಗಳು ಹಿಂದೂ ಮತ್ತು ಮುಸಲ್ಮಾನರುಗಳು ಭೇಟಿ ನೀಡುವ ಭಾವೈಕ್ಯತೆ ಸ್ಥಳಗಳಾಗಿರುತ್ತವೆ.<br>• ಶಿವಮೊಗ್ಗ ಜಿಲ್ಲೆ ತೀರ್ಥಹಳ್ಳಿ ತಾಲ್ಲೂಕಿನ ಹಣಗೆರೆ ಗ್ರಾಮ ಶ್ರೀ ಚೌಡೇಶ್ವರಿ ಮತ್ತು ಭೂತರಾಯ ಹಜರತ್ ಸೈಯದ್ ಸಾದತ್ ಆಲಿ ದರ್ಗಾ.<br>• ಚಿಕ್ಕಮಗಳೂರು ಜಿಲ್ಲೆ, ಚಿಕ್ಕಮಗಳೂರು ತಾಲ್ಲೂಕಿನ ಐ.ಡಿ ಪೀಠ ಗ್ರಾಮದಲ್ಲಿರುವ ಶ್ರೀ ಗುರು ದತ್ತಾತ್ರೇಯ ಬಾಬಾ ಬುಡನ್ ಸ್ವಾಮಿ ದರ್ಗಾ. |
| ಆ) | ಸದರಿ ಭಾವೈಕ್ಯತ ಸ್ಥಳಗಳು ಕ್ಷೇತ್ರಗಳು ಅಘೋಷಿತ ಪ್ರವಾಸೋದ್ಯಮ ಕ್ಷೇತ್ರಗಳಾಗಿ ಮಾರ್ಪಟ್ಟಿದ್ದು, ಈ ಕ್ಷೇತ್ರಗಳಲ್ಲಿ ಮೂಲಸೌಲಭ್ಯಗಳ ಕೊರತೆಯಿಂದ ಅಲ್ಲಿಗೆ ಬರುವ ಭಕ್ತಾಧಿಗಳು ತೀವ್ರ ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ; | • ಸದರಿ ಎರಡು ಭಾವೈಕ್ಯತಾ ಸ್ಥಳಗಳು ಹಾಗೂ ಕ್ಷೇತ್ರಗಳಿಗೆ ಬರುವ ಭಕ್ತಾಧಿಗಳಿಗೆ ಅಗತ್ಯವಿರುವ ಶುದ್ಧ ಕುಡಿಯುವ ನೀರು, ಶೌಚಾಲಯ ವ್ಯವಸ್ಥೆ ಕಲ್ಪಿಸಲಾಗಿದೆ.<br>• ಸದರಿ ದೇವಾಲಯಗಳಿಗೆ ಭೇಟಿ ನೀಡುವ ಹಿರಿಯ ನಾಗರೀಕರಿಗೆ ಪ್ರತ್ಯೇಕ ಸರದಿ ಸಾಲಿನಲ್ಲಿ ದರ್ಶನದ ವ್ಯವಸ್ಥೆಯನ್ನು ಕಲ್ಪಿಸಲಾಗುತ್ತಿದೆ<br>• ವಿಶೇಷ ಚೇತನರಿಗೆ ನೇರ ದರ್ಶನದ ವ್ಯವಸ್ಥೆಯನ್ನು ಕಲ್ಪಿಸಲಾಗಿರುತ್ತದೆ ಮತ್ತು ವ್ಹೀಲ್ ಚೇರ್ ವ್ಯವಸ್ಥೆಯನ್ನು ಕಲ್ಪಿಸಲು ಕ್ರಮವಹಿಸಲಾಗಿದೆ. |
| ಇ) | ಹೌದಾದಲ್ಲಿ ಸದರಿ ಭಾವೈಕ್ಯತ ಕ್ಷೇತ್ರಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರವು ಸಂಬಂಧಪಟ್ಟ ಜಿಲ್ಲೆಯ ಜಿಲ್ಲಾಧಿಕಾರಿ ಹಾಗೂ ಪ್ರವಾಸೋದ್ಯಮ ಇಲಾಖೆಯ ಅಧಿಕಾರಿಗಳಿಗೆ ನಿರ್ದೇಶನ ನೀಡುವುದೇ? (ವಿವರ ನೀಡುವುದು) | ಸದರಿ ಭಾವೈಕ್ಯತೆಯ ಕ್ಷೇತ್ರಗಳನ್ನು ಅಭಿವೃದ್ಧಿ ಪಡಿಸಲು ಈಗಾಗಲೇ ಕಲ್ಪಿಸಲಾಗಿರುವ ಮೂಲಭೂತ ಸೌಕರ್ಯಗಳ ಜೊತೆಗೆ ಹೆಚ್ಚುವರಿ ಮೂಲಭೂತ ಸೌಕರ್ಯದ ಅವಶ್ಯಕತೆ ಕುರಿತು ಪ್ರಸ್ತಾವನೆಗಳು ಸ್ವೀಕೃತವಾದಲ್ಲಿ, ಸದರಿ ಪ್ರಸ್ತಾವನೆಗಳನ್ನು ಪರಿಶೀಲಿಸಿ ದೇವಾಲಯದ ನಿಧಿಯಿಂದ ಕೆಲವೊಂದು ಅಭಿವೃದ್ಧಿ ಕಾಮಗಾರಿಗಳಿಗೆ ಮೊತ್ತವನ್ನು ಭರಿಸಲು ಕ್ರಮ ಕೈಗೊಳ್ಳಲಾಗುತ್ತಿದೆ. |

ಸಂಖ್ಯೆ: ಕಂಇ 41 ಮುಸಪ್ರ 2025

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಧಾರ್ಮಿಕ ದತ್ತಿ ಸಚಿವರು